1. ಬಸವನ ಬಾಗೇವಾಡಿ ಮತಕ್ಷೇತ್ರದಲ್ಲಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಹಾಗೂ ಬಿ.ಸಿ.ಎಂ. ವಿದ್ಯಾರ್ಥಿನಿಲಯಗಳ ವಿವರ ಕೆಳಕಂಡಂತಿದೆ.

	ಮೆಟ್ರಿಕ್-ಪೂರ್ವ ವಿದ್ಯಾರ್ಥಿನಿಲಯಗಳು		ಮೆಟ್ರಿಕ್-ನಂತರ ವಿದ್ಯಾರ್ಥಿನಿಲಯಗಳು	
	ಸರ್ಕಾರಿ	ಅನುದಾನಿತ	ಸರ್ಕಾರಿ	ಅನುದಾನಿತ
ಪರಿಶಿಷ್ಟ ಜಾತಿ	3	1	-	-
ಪರಿಶಿಷ್ಟ ವರ್ಗ	-	-	-	-
ಹಿಂದುಳಿದ ವರ್ಗ	3	-	1	-

2. ಇಲ್ಲ

3. ಉದ್ಭವಿಸುವುದಿಲ್ಲ.

ಕೃಷ್ಣ ಮೇಲ್ದಂಡೆ ಯೋಜನೆಯಡಿ ಹಿನ್ನೀರಿನಿಂದ ಮುಳುಗಡೆಯಾದ ಸಂತ್ರಸ್ಥರಿಗೆ ಪರ್ಯಾಯ ತರಬೇತಿ ಕೇಂದ್ರಗಳ ಸ್ಥಾಪನೆ

2649 (3437) ಶ್ರೀ ಬೆಳ್ಳುಬ್ಬಿ ಸಂಗಪ್ಪ ಕಲ್ಲಪ್ಪ (ಬಸವನ ಬಾಗೇವಾಡಿ) :— ಮಾನ್ಯ ಸಣ್ಣ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಬಸವನ ಬಾಗೇವಾಡಿ ಮತಕ್ಷೇತ್ರವು ಕೃಷ್ಣಾ ಮೇಲ್ದಂಡೆ ಯೋಜನೆಯಡಿ ಹಿನ್ನೀರಿನಿಂದ ಮುಳುಗಡೆಯಾಗಲಿರುವ ಸಂತ್ರಸ್ಥರಿಗೆ ಪುನರ್ವಸತಿ ಪ್ರದೇಶಗಳಲ್ಲಿ ಇಲಾಖೆಯ ವತಿಯಿಂದ ಪರ್ಯಾಯ ತರಬೇತಿ ಕೇಂದ್ರಗಳನ್ನು ಪ್ರಾರಂಭಿಸುವ ವಿಚಾರ ಸರ್ಕಾರದ ತೀರ್ಮಾನದಲ್ಲಿದೆಯೇ;

ಆ) ಹಾಗಿದ್ದಲ್ಲಿ ಈ ಯೋಜನೆ ಯಾವ ಹಂತದಲ್ಲಿದೆ; ಯಾವಾಗ ಪ್ರಾರಂಭಿಸಲಾಗುವುದು? (ವಿವರ ನೀಡುವುದು)

ಶ್ರೀ ಎಸ್.ಆರ್. ಕಾಶಪ್ಪನವರ್ (ಸಣ್ಣ ಕೈಗಾರಿಕಾ ಸಚಿವರು) :—

ಇಲ್ಲ. ಆದರೆ ರಾಜ್ಯದ ಮಹತ್ವದ ನೀರಾವರಿ ಯೋಜನೆಯಲ್ಲಿ ಹಿನ್ನೀರಿನಿಂದ ಮುಳುಗಡೆಯಾದ ಸಂತ್ರಸ್ಥರು ಕೈಗಾರಿಕಾ ತರಬೇತಿ ಪಡೆಯಲು ಮುಂದೆ ಬಂದಲ್ಲಿ ಅವರುಗಳಿಗೆ ಆದ್ಯತೆ ಮೇರೆಗೆ ತರಬೇತಿ ನೀಡಲಾಗುವುದು.

ಆ) ಉದ್ಭವಿಸುವುದಿಲ್ಲ.